ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 710(842)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪುರೆ(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಮಾನ್ಯ ನಗರಾಭಿವೃದ್ದಿ ಸಚಿವರು

ವಿಷಯ : ಮಂಡಳಿ ವತಿಯಿಂದ ಕಾಮಗಾರಿಗಳ ಕುರಿತು

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ನಗರದಲ್ಲಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು; ಸದರಿ ಕಾಮಗಾರಿಗಳು ಯಾವ ಹಂತದಲ್ಲಿದೆ; (ಅನುದಾನದೊಂದಿಗೆ ವಾರ್ಡ್‌ವಾರು, ಕಾಮಗಾರಿವಾರು ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ಬೀದರ್ ನಗರದಲ್ಲಿ ಯಾವುದೇ ಕಾಮಗಾರಿಯನ್ನು ಕೈಗೊಳ್ಳದಿರುವ ವಾರ್ಡ್‌ಗಳಾವುವು; ಸದರಿ ವಾರ್ಡ್‌ಗಳಲ್ಲಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ; (ವಾರ್ಡ್‌ವಾರು ಮಾಹಿತಿ ಒದಗಿಸುವುದು)

(ಇ) ಬೀದರ್ ನಗರದ ಹೊಸ ವಾರ್ಡ್‌ಗಳಿಗೆ ಒಳಚರಂಡಿ ಮತ್ತು ನೀರು ಸರಬರಾಜು ಮಾಡುವ ಬಗ್ಗೆ ಅಂದಾಜು ಪಟ್ಟಿಯನ್ನು ಸರ್ಕಾರ ಸಿದ್ದಪಡಿಸಿದೆಯೇ; ಹಾಗಿದ್ದಲ್ಲಿ, ಯಾವ ಯಾವ ವಾರ್ಡ್‌ಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು; (ವಾರ್ಡ್‌ವಾರು, ಕಾಮಗಾರಿವಾರು ಅನುದಾನಗಳ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಬೀದರ್ ನಗರದ ಅಭಿವೃದ್ದಿಗೆ ಸರ್ಕಾರವು ಇನ್ನು ಹೆಚ್ಚಿನ ಯೋಜನೆಗಳನ್ನು ರೂಪಿಸುವುದೇ? (ಸಂಪೂರ್ಣ ವಿವರ ನೀಡುವುದು)